ಇ) ಎಂದಿನಿಂದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು?

**ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)**

ಅ) ಹೌದು.

ಆ) ಶಾಲಾ ಸಂಕೀರ್ಣ ಕಟ್ಟಡ ನಿರ್ಮಾಣ ಮಾಡಲು ರೂ. 13.05 ಕೋಟಿಗಳಿಗೆ ಅಂದಾಜು ಪಟ್ಟಿ ತಯಾರಿಸಲಾಗಿದ್ದು, ಸದರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.

ಇ) ಆಡಳಿತಾತ್ಮಕ ಅನುಮೋದನೆ ನೀಡಿದ ನಂತರ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

**ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿಗಳ ಕೊರತೆ**

**489(527); ಶ್ರೀ ಅಂಗಾರ ಎಸ್. (ಸುಳ್ಯ)**

ಅ) ಸುಳ್ಯ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಗೊಳಪಟ್ಟ ಪುತ್ತೂರು ತಾಲ್ಲೂಕಿನ ಕಡಬ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಎಷ್ಟು ಜನ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ;

ಆ) ಈ ಆರೋಗ್ಯ ಕೇಂದ್ರಕ್ಕೆ ಮಂಜೂರಾದ ಹುದ್ದೆಗಳೆಷ್ಟು;

ಇ) ಖಾಲಿಯಿರುವ ಹುದ್ದೆಗಳನ್ನು ಎಷ್ಟು ಸಮಯದಲ್ಲಿ ಭರ್ತಿ ಮಾಡಲಾಗುವುದು (ಪೂರ್ತಿ ವಿವರವನ್ನು ಹುದ್ದೆವಾರು ನೀಡುವುದು);

**ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ), ಆ) ಮತ್ತು ಇ) ಸುಳ್ಯ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಗೊಳಪಟ್ಟ ಪುತ್ತೂರು ತಾಲ್ಲೂಕಿನ ಕಡಬ ಸಮುದಾಯ ಆರೋಗ್ಯ ಕೇಂದ್ರವು 30 ಹಾಸಿಗೆಗಳ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಗಿದೆ.

ಆದರೆ ಪ್ರಸ್ತುತ ಪ್ರಾಥಮಿಕ ಆರೋಗ್ಯ ಕೇಂದ್ರದ ಮಾದರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದೆ. ಈ ಕೇಂದ್ರದಲ್ಲಿ 02 ವೈದ್ಯಾಧಿಕಾರಿಗಳು ಮತ್ತು 17 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಈ ಸಮುದಾಯ ಆರೋಗ್ಯ ಕೇಂದ್ರಕ್ಕೆ ಈ ಹಿಂದೆ 28 ಹುದ್ದೆಗಳು ಮಂಜೂರಾಗಿದ್ದು, ಹೆಚ್ಚುವರಿಯಾಗಿ 21 ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

ಮೇಲ್ದರ್ಜೆಗೇರಿಸಿದ ಕಟ್ಟಡ ಕಾಮಗಾರಿ ಶೇಕಡ 60% ರಷ್ಟು ಪೂರ್ಣಗೊಂಡ ನಂತರ ಹೆಚ್ಚುವರಿ ಹುದ್ದೆಗಳನ್ನು ಭರ್ತಿ ಮಾಡಲು ಉದ್ದೇಶಿಸಲಾಗಿದೆ.

**ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರ ಸಿಬ್ಬಂದಿಗಳ ಕೊರತೆ**

**490(529); ಶ್ರೀ ಅಂಗಾರ ಎಸ್. (ಸುಳ್ಯ)**

ಅ) ಸುಳ್ಯ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಗೊಳಪಟ್ಟ ಪುತ್ತೂರು ತಾಲ್ಲೂಕಿನ ಕಾಣಿಯಾರು, ಕ್ಯೊಲ, ನೆಲ್ಯಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಎಷ್ಟು ಜನ ವೈದ್ಯರು ಮತ್ತು ಸಿಬ್ಬಂದಿ ವರ್ಗಗಳು ಇರಬೇಕಿತ್ತು;

ಆ) ಈಗಿರುವ ಸಿಬ್ಬಂದಿಗಳೆಷ್ಟು; ಖಾಲಿಯಿರುವ ಹುದ್ದೆಗಳನ್ನು ಎಷ್ಟು ಸಮಯದಲ್ಲಿ ಭರ್ತಿ ಮಾಡಲಾಗುವುದು; (ಆರೋಗ್ಯ ಕೇಂದ್ರವಾರು ವಿವರ ನೀಡುವುದು)?

**ಶ್ರೀ ಯು.ಟಿ. ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ) ಮತ್ತು ಆ) ವಿವರಗಳನ್ನು **ಅನುಬಂಧ–1** ರಲ್ಲಿ ನೀಡಲಾಗಿದೆ.

ಆರೋಗ್ಯ ಮತ್ತು ಕುಟುಂಬ ಇಲಾಖೆಯಲ್ಲಿ ಖಾಲಿಯಿರುವ 983 ತಜ್ಞ ವೈದರು, 331 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, 87 ದಂತ ಆರೋಗ್ಯಾಧಿಕಾರಿಗಳ ನೇಮಕಾತಿಯನ್ನು ವಿಶೇಷ ನಿಯಮಗಳನ್ನೂ ರೂಪಿಸಿ, ಯಾವುದೇ ಲಿಖಿತ ಪರೀಕ್ಷೆ ಹಾಗೂ ಮೌಖಿಕ